ಕುಣಿಗಲ್ ಪಟ್ಟಣವನ್ನು ಐ.ಡಿ.ಎಸ್.ಎಂ.ಟಿ. ಯಲ್ಲಿ ತೆಗೆದುಕೊಳ್ಳುವ ಬಗ್ಗೆ

449 (765) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಐ.ಡಿ.ಎಸ್.ಎಂ.ಟಿ. ಯೋಜನೆ ಅಡಿ ಅಭಿವೃದ್ಧಿಗಾಗಿ ಈ ವರ್ಷ ಕರ್ನಾಟಕದಲ್ಲಿ ಎಷ್ಟು ಪಟ್ಟಣಗಳನ್ನು ಸೇರಿಸಲಾಗಿದೆ?

ಆ) ಕುಣಿಗಲ್ ಪಟ್ಟಣವು ಈ ಯೋಜನೆಯಡಿಯಲ್ಲಿ ಸೇರಿಸಲಾಗಿದೆಯೇ?

ಶ್ರೀ ಮೀರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು)

ಅ) ಇದುವರೆಗೆ ನಾಲ್ಕು ಪಟ್ಟಣಗಳು.

ಆ) ಇಲ್ಲ.

ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರು

450 (767) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಂಬರುವ ವರ್ಷದಲ್ಲಿ ಸರ್ಕಾರವು ಎಷ್ಟು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಇಚ್ಛಿಸಿದೆ;

ಆ) ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಗಮನಿಸಬೇಕಾದ ಅಂಶಗಳು;

ಇ) ಕುಣಿಗಲ್ ಕ್ಷೇತ್ರದಲ್ಲಿ ಯಾವುದೇ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುತ್ತದೆಯೇ?

ಶ್ರೀ ಮಾಲೀಕಯ್ಯ ಏ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಆಯವ್ಯಯ ಲಭ್ಯತೆ ಹಾಗೂ ಸ್ಥಳೀಯ ಅಗತ್ಯವನ್ನು ಅನುಸರಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು.

ಆ) ಹಿಂದುಳಿದ ವರ್ಗದವರ ವಿದ್ಯಾರ್ಥಿಗಳ ಸಂಖ್ಯೆ ಶಿಕ್ಷಣ ಸಂಸ್ಥೆಗಳು, ಬಾಡಿಗೆ ಕಟ್ಟಡ ದೊರಕುವುದು ಹಾಗೂ ಆಯವ್ಯಯ ಅವಕಾಶದನ್ವಯ ನಿಲಯಗಳನ್ನು ಪ್ರಾರಂಭಿಸಲಾಗುವುದು.

ಇ) ಕುಣಿಗಲ್ ಕ್ಷೇತ್ರದಲ್ಲಿ ಕೆಂಪನಹಳ್ಳಿ ಹಾಗೂ ನಾಗವಲ್ಲಿಯಲ್ಲಿ ವಿದ್ಯಾರ್ಥಿನಿಲಯ ಪ್ರಾರಂಭಿಸಲು ಮನವಿ ಸ್ವೀಕರಿಸಲಾಗಿದೆ. ಇದೇ ತರಹ ಬೇರೆ ಕಡೆಗಳಿಂದ ಹಾಗೂ ಬರುವ ಬೇಡಿಕೆಗಳನ್ನು ಗಣನೆಗೆ ತೆಗೆದುಕೊಂಡು ಸೂಕ್ತ ಸಮಯದಲ್ಲಿ ತೀರ್ಮಾನ ತೆಗೆದುಕೊಳ್ಳಲಾಗುವುದು.